ಶ್ರೀ ಬಿ. ಬಸವಲಿಂಗಪ್ಪ.—ಮಾನ್ಯ ಅಧ್ಯಕ್ಷರೆ ಒಂದು ವಿಷಯ. ರಾಜ್ಯಸಭೆಯಲ್ಲಿ ಛೇರ್ಮನ್ ಆಗಿರತಕ್ಕವರು....

ಅಧ್ಯಕ್ಷರು.—ನೀವು ಯಾವುದರ ಬಗ್ಗೆ ಹೇಳುತ್ತಿದ್ದೀರಿ ?

ಶ್ರೀ ಬಿ. ಬಸವಲಿಂಗಪ್ಪ.—ನಾನು ಹೇಳುತ್ತೇನೆ, ತಾವು ಕೇಳಿ. ರಾಜ್ಯಸಭೆಯಲ್ಲಿ ಛೇರ್ಮನ್ ಆಗಿರತಕ್ಕ ಮಾನ್ಯ ವೆಂಕಟರಾಮನ್‌ರವರು ಒಂದು ರೂಲಿಂಗ್ ಕೊಟ್ಟಿದ್ದಾರೆ. ಮಾನ್ಯ ಮಂತ್ರಿಗಳು ಆವರವರ ಖಾತೆಗೆ ಸಂಬಂಧಪಟ್ಟ ವಿಷಯಗಳು ಬಂದಾಗ ಸಂಬಂಧಪಟ್ಟ ಮಂತ್ರಿಗಳು ಉತ್ತರ ಕೊಡಬೇಕು. ಅವರು ಇಲ್ಲದಿದ್ದರೆ ಅಧ್ಯಕ್ಷರಿಗೆ ಕಾಗದ ಬರೆದು ತಿಳಿಸಬೇಕು. ಆ ರೀತಿ ಮಾಡಿರದಿದ್ದರೆ ಸಭೆಗೆ ಅಗೌರವ ತೋರಿಸಿದಂತಾಗುತ್ತದೆಂದು ಹೇಳಿದ್ದಾರೆ.

ಅಧ್ಯಕ್ಷರು.—ನಾನು ಕೂಡ ಪತ್ರಿಕೆಯಲ್ಲಿ ಅದನ್ನು ಓದಿದ್ದೇನೆ. ಆ ಪ್ರಕಾರವೇ ಹೇಳುತ್ತೇನೆ.

ವರದಿಯನ್ನೊಪ್ಪಿಸುವುದು

ಶ್ರೀ ಲಕ್ಷ್ಮೀನರಸಿಂಹಯ್ಯ (ಉಪಾಧ್ಯಕ್ಷರು).—ಖಾಸಗಿ ಸದಸ್ಯರ ವಿಧೇಯಕ ಹಾಗೂ ನಿರ್ಣಯಗಳ ಸಮಿತಿಯ ಮೊದಲನೆಯ ವರದಿಯೊನ್ನೊಪ್ಪಿಸುತ್ತೇನೆ.

ಶ್ರೀ ಗುರುಪಾದಪ್ಪ ನಾಗಮಾರಪಲ್ಲಿ.—ಸದನವು ಈ ವರದಿಯನ್ನು ಒಪ್ಪುತ್ತದೆಂದು ನಾನು ಸೂಚಿಸುತ್ತೇನೆ.

ಅಧ್ಯಕ್ಷರು.—ವರದಿಯನ್ನು ಒಪ್ಪಿಸಲಾಯಿತು.

ಮನವಿಯನ್ನೊಪ್ಪಿಸುವುದು

ಶ್ರೀ ಬಸವರಾಜ್.—ಅಧ್ಯಕ್ಷರೆ, ನನ್ನ ಹೆಸರಿನಲ್ಲಿರುವ ದಕ್ಷಿಣ ಕನ್ನಡ ಜಿಲ್ಲೆ ಉಡುಪಿ ತಾಲ್ಲೂಕಿನ ಪೆರ್ಡೂರು ಗ್ರಾಮಕ್ಕೆ ಕುಡಿಯುವ ನೀರಿನ ಸೌಲಭ್ಯವನ್ನು ಒದಗಿಸುವ ಬಗ್ಗೆ ಮನವಿಯನ್ನು ಈ ಸದನಕ್ಕೆ ಒಪ್ಪಿಸುತ್ತಿದ್ದೇನೆ.

ಅಧ್ಯಕ್ಷರು.—ಮನವಿಯನ್ನು ಒಪ್ಪಿಸಲಾಯಿತು.

| ರಾಜ್ಯದಲ್ಲಿರುವ ಬರಗಾಲ ಪರಿಸ್ಥಿತಿಯ ಬಗ್ಗೆ ಗಮನ ಸೆಳೆಯಂವ ಸೂಚನೆಗಳು

ಶ್ರೀ ಆರ್. ವೆಂಕಟರಾಮಯ್ಯ.—ಅಧ್ಯಕ್ಷರೆ, ರಾಜ್ಯಾದ್ಯಂತ ಅದರಲ್ಲೂ ವಿಶೇಷವಾಗಿ ಕೋಲಾರ, ಬೀದರ್, ಮೈಸೂರು ಹಾಗೂ ಇತರೆ ಜಿಲ್ಲೆಗಳಲ್ಲಿ ಈ ವರ್ಷವೂ ಬರಗಾಲ ಪರಿಸ್ಥಿತಿ ಮುಂದುವರಿದಿರುವುದರಿಂದ ಜನ ಹಾಗೂ ಜಾನುವಾರುಗಳಿಗೆ ಉಂಟಾಗಿರುವ ತೊಂದರೆಯ ಬಗ್ಗೆ ಕಂದಾಯ, ಯೋಜನೆ ಹಾಗೂ ಕಾರ್ಮಿಕ ಮಂತ್ರಿಗಳ ಗಮನವನ್ನು ಸೆಳೆಯುತ್ತೇನೆ.

ಶ್ರೀ ಎಸ್. ಆರ್. ಬೊಮ್ಮಾಯಿ.—ಅಧ್ಯಕ್ಷರೆ, ಬರಗಾಲದ ವಿಚಾರದಲ್ಲಿ ವಿವರವಾದಂಥ ಹೇಳಿಕೆಯನ್ನು ನಾನು ಸೋಮವಾರ ಕೊಡುತ್ತೇನೆ. ಈಗ ಕೊಡಲಿಕ್ಕೆ ಹೋದರೆ ಅರ್ಧಂಬರ್ಧ ಆಗುತ್ತದೆ. ಎಲ್ಲಾ ಜಿಲ್ಲಾಧಿಕಾರಿಗಳಿಂದ ವರದಿ ಬರುತ್ತಿದೆ. ಆದ್ದರಿಂದ ಸೋಮವಾರ ಕೊಡುತ್ತೇನೆ.

|| ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಹಂಗಾಮಿಯಾಗಿ ಕೆಲಸ ಮಾಡುತ್ತಿರುವ ಅಧ್ಯಾಪಕರನ್ನು ತೆಗೆದುಹಾಕಿರುವುದು

ಶ್ರೀ ವೇದಾಂತ ಹೆಮ್ಮಿಗೆ.—ಅಧ್ಯಕ್ಷರೆ, ಮೈಸೂರು ವಿಶ್ವವಿದ್ಯಾನಿಲಯದಲ್ಲಿ ಕಳೆದ ೭-೮ ವರ್ಷಗಳಿಂದ ಕೆಲಸ ಮಾಡುತ್ತಿದ್ದ ಹಂಗಾಮಿ ಅಧ್ಯಾಪಕರನ್ನು ಇತ್ತೀಚೆಗೆ ಕೆಲಸದಿಂದ ತೆಗೆದು ಹಾಕಿರುವುದರಿಂದ, ಉಂಟಾಗಿರುವ ಗಂಭೀರ ಪರಿಸ್ಥಿತಿಯ ಬಗ್ಗೆ ಶಿಕ್ಷಣ ಮಂತ್ರಿಗಳ ಗಮನವನ್ನು ಸೆಳೆಯುತ್ತೇನೆ.

ಶ್ರೀ ಡಿ. ಮಂಜುನಾಥ್ (ವಿದ್ಯಾಮಂತ್ರಿಗಳು).—ಸನ್ಮಾನ್ಯ ಅಧ್ಯಕ್ಷರೆ, ಹಂಗಾಮಿ